ಕರ್ನಾಟಕ ವಿಧಾನ ಸಭೆ, ಸಂಶೋಧನಾ ಮತ್ತು ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಇಲಾಖೆ / ವಿಷಯ: DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE: 11/10/2019

ಶಿಕ್ಷೆ ಸ್ವರೂಪ, ಪ್ರಮಾಣ ನಿಗದಿಗೆ ಸಿದ್ಧವಾಗಿದೆ ಕರಡು | ಹೈಕೋರ್ಟ್‌ಗೆ ಗೆಜೆಟ್ ಅಧಿಸೂಚನೆ ಸಲ್ಲಿಸಿದ ಸರ್ಕಾರ

# ಅನಧಿಕೃತ ಕಟ್ಟಡಕ್ಕೆ ಅವಕಾಶ: ಅಧಿಕಾರಿಗಳಿಗೆ ದಂಡ

ಬೆಂಗಳೂರು: ಅನಧಿಕೃತ ಕಟ್ಟಡಗಳ ನಿರ್ಮಾಣಕ್ಕೆ ಕಾರಣರಾದ ಅಧಿಕಾರಿಗಳ ವಿರುದ್ಧ ಕ್ರಮ ಜರುಗಿಸಲು 'ಕರ್ನಾಟಕ ಪೌರ ನಿಗಮ ಕಾಯ್ದೆ-1976ರ ಸೆಕ್ಷನ್ 321 ಬಿ ಪ್ರಕಾರ ಶಿಕ್ಷೆಯ ಸ್ವರೂಪ ಹಾಗೂ ಪ್ರಮಾಣ ನಿಗದಿಪಡಿಸುವ ಸಂಬಂಧ ರಾಜ್ಯ ಸರ್ಕಾರ ಕರಡು ನಿಯಮಗಳನ್ನು ರೂಪಿಸಿದ್ದು ಗೆಜೆಟ್ ಅಧಿಸೂಚನೆಯನ್ನು ಗುರುವಾರ ಹೈಕೋರ್ಟ್‌ಗೆ ಸಲ್ಲಿಸಿದೆ.



ಈ ಸಂಬಂಧ ವಕೀಲ ಎಸ್. ಉಮಾಪತಿ ಸಲ್ಲಿಸಿದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯು ಮುಖ್ಯ ನ್ಯಾಯಮೂರ್ತಿ ಎ.ಎಸ್. ಓಕ್ ಹಾಗೂ ನ್ಯಾ. ಎಸ್.ಆರ್. ಕೃಷ್ಣಕುಮಾರ್ ಅವರಿದ್ದ ವಿಭಾಗೀಯ ನ್ಯಾಯಪೀಠದ ವಿಚಾರಣೆಗೆ ಬಂದಿತ್ತು.

ಈ ವೇಳೆ ನಗರಾಭಿವೃದ್ಧಿ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಡಾ. ಇ.ವಿ. ರಮಣರೆಡ್ಡಿ ಅವರ ಪ್ರಮಾಣಪತ್ರವನ್ನು 'ಕರ್ನಾಟಕ ಪೌರ ನಿಗಮಗಳು (ಅನಧಿಕೃತ ಕಟ್ಟಡಗಳ ನಿರ್ಮಾಣ ತಡೆಯಲು ವಿಫಲರಾದ ಅಧಿಕಾರಿಗಳಿಗೆ ದಂಡ ವಿಧಿಸುವ) ನಿಯಮಗಳು-2019'ರ ಕರಡು ಗೆಜೆಟ್ ಅಧಿಸೂಚನೆಯ ಪ್ರತಿಯೊಂದಿಗೆ ಸರ್ಕಾರದ ಪರ ವಕೀಲರು ನ್ಯಾಯಪೀಠಕ್ಕೆ ಸಲ್ಲಿಸಿದರು.

ಪ್ರಕರಣಕ್ಕೆ ಸಂಬಂಧಿಸಿದಂತೆ 2019ರ ಸೆ.17ರಂದು ನ್ಯಾಯಾಲಯ ನೀಡಿದ್ದ ಆದೇಶದಂತೆ ಅ.3ರಂದು ಪರಿಷ್ಕೃತ ಕರಡು ನಿಯಮಗಳನ್ನು ರೂಪಿಸಿ ಅ.4ರಂದು ಕರ್ನಾಟಕ ರಾಜ್ಯಪತ್ರದಲ್ಲಿ ಅಧಿಕೃತವಾಗಿ ಪ್ರಕಟಿಸಲಾಗಿದೆ. ಕರಡು ನಿಯಮಗಳು ಬಿಬಿಎಂಪಿ ಸೇರಿದಂತೆ ಪಾಲಿಕೆಗಳಿಗೆ ಅನ್ವಯವಾಗಲಿದೆ. ಈ ಬಗ್ಗೆ ಸಾರ್ವಜನಿಕರಿಂದ ಆಕ್ಷೇಪಣೆ ಮತ್ತು ಸಲಹೆಗಳನ್ನು ಆಹ್ವಾನಿಸಲಾಗಿದ್ದು, ಇದಕ್ಕಾಗಿ 30 ದಿನ ಕಾಲಾವಕಾಶ ನೀಡಲಾಗಿದ್ದು, ಬಳಿಕನಿಯಮಗಳನ್ನುಅಂತಿಮಗೊಳಿಸಲಾಗುವುದು ಎಂದು ಕರಡು ಅಧಿಸೂಚನೆಯಲ್ಲಿ ಹೇಳಲಾಗಿದೆ.

ಇದನ್ನು ದಾಖಲಿಸಿಕೊಂಡ ನ್ಯಾಯಪೀಠ, ಕರಡು ಅಧಿಸೂಚನೆಗೆ ಸಂಬಂಧಿಸಿದಂತೆ ಆಕ್ಷೇಪಣೆಗಳನ್ನು ಸಲ್ಲಿಸುವಂತೆ ಅರ್ಜಿದಾರರಿಗೆ ಸೂಚಿಸಿ ವಿಚಾರಣೆಯನ್ನು ನ.18ಕ್ಕೆ ಮುಂದೂಡಿತು.

## ಕರಡು ನಿಯಮಗಳಲ್ಲೇನಿದೆ?

- ಪೌರ ನಿಗಮ ಕಾಯ್ದೆ-1976ರ ಸೆಕ್ಷನ್ 321 ಬಿ ಪ್ರಕಾರ ಸಂಬಂಧಪಟ್ಟ ಅಧಿಕಾರಿಯು ತನ್ನ ಅಧಿಕಾರವಧಿ ಮತ್ತು ಅಧಿಕಾರ ವ್ಯಾಪ್ತಿಯಲ್ಲಿ ಅಕ್ರಮ ಕಟ್ಟಡ ನಿರ್ಮಾಣ ತಡೆಯಲು ವಿಫಲವಾದ ಬಗ್ಗೆ ದೂರು ಬಂದರೆ ಅಥವಾ ಆಯುಕ್ತರೇ ಸ್ವಯಂಪ್ರೇರಿತ ದೂರು ದಾಖಲಿಸಿಕೊಂಡು ಶೋಕಾಸ್ ನೋಟಿಸ್ ಜಾರಿಗೊಳಿಸಿದ ಬಳಿಕ ದಂಡ ವಿಧಿಸಲು ಕ್ರಮ ಕೈಗೊಳ್ಳಬೇಕು.
- ಮೊದಲ ಬಾರಿಗೆ ತಪ್ಪು ಎಸಗಿದರೆ 25 ಸಾವಿರಕ್ಕೆ ಕಡಿಮೆ ಇಲ್ಲದಂತೆ ಮತ್ತು 50 ಸಾವಿರ ರೂ.ಗೆ ಮೀರದಂತೆ ದಂಡ ವಿಧಿಸಬಹುದು. ಎರಡನೇ ತಪ್ಪಿಗೆ 50 ಸಾವಿರಕ್ಕೆ ಕಡಿಮೆ ಇಲ್ಲದಂತೆ ಮತ್ತು 1 ಲಕ್ಷ ರೂ.ಗೆ ಮೀರದಂತೆ ದಂಡ ವಿಧಿಸಬಹುದು. ಮೂರನೇ ಮತ್ತು ಅದರ ನಂತರದ ಪ್ರತಿ ತಪ್ಪಿಗೆ ಆಯುಕ್ತರು ಕಾಯ್ದೆಯ ಸೆಕ್ಷನ್ 90ರಡಿ ಕ್ರಮ ಜರುಗಿಸಬಹುದು.
- ದಂಡ ಪಾವತಿಸಿದ ಅಧಿಕಾರಿಯು ನೀಡಿದ್ದ ಕಟ್ಟಡ ಯೋಜನಾ ಮಂಜೂರಾತಿಗೆ ಅನುಮೋದನೆ ನೀಡುವಂತಿಲ್ಲ.
- ಸಂತ್ರಸ್ತ ಅಥವಾ ಬಾಧಿತ ಅಧಿಕಾರಿಯು ಸಂಬಂಧಪಟ್ಟ ಪ್ರಾದೇಶಿಕ ಆಯುಕ್ತರಿಗೆ 30 ದಿನಗಳಲ್ಲಿ ಮನವಿ ಸಲ್ಲಿಸಬೇಕು. ಆ ಅಧಿಕಾರಿಗೆ ಶೋಕಾಸ್ ನೋಟಿಸ್ ನೀಡಿ ಅವರ ವಾದ ಕೇಳಿ, ಮನವಿ ಸಲ್ಲಿಸಿದ 45 ದಿನಗಳಲ್ಲಿ ಮನವಿಯನ್ನು ಇತ್ಯರ್ಥಪಡಿಸಬೇಕು. ಪ್ರಾದೇಶಿಕ ಆಯುಕ್ತರ ತೀರ್ಮಾನವೇ ಅಂತಿಮ.